ಕರ್ನಾಟಕ ಸರ್ಕಾರ

**ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಹಾಗೂ ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು ರವರು ಹೊರಡಿಸಿರುವ ನಡವಳಿಗಳು:**

**ವಿಷಯ:** ಮಕ್ಕಳ ರಕ್ಷಣಾ ನಿರ್ದೇಶನಾಲಯ, ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಗೆ ಸಂಬಂಧಿಸಿದಂತೆ ಮುಖ್ಯ ಜಾಗೃತ ಅಧಿಕಾರಿ(Chief Vigilance Officer) ಯವರನ್ನು ನೇಮಿಸುವ ಕುರಿತು.

**ಉಲ್ಲೇಖ:** 1)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 14 ಸೇಲೋಯು 2016, ದಿ:14-03-2016
2) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016 ದಿ:22-06-2016
3)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 88 ಸೇಲೋಯು 2016 (ಭಾಗ-1) ದಿನಾಂಕ:22-02-2018.

*****

**ಪ್ರಸ್ತಾವನೆ:**

ಮೇಲಿನ ಉಲ್ಲೇಖಿತ ಕ್ರಮ ಸಂಖ್ಯೆ(1)ರಲ್ಲಿ ದಿನಾಂಕ:14-03-2016ರ ಆದೇಶದನ್ವಯ, ರಾಜ್ಯದಲ್ಲಿ ಭ್ರಷ್ಟಾಚಾರ ತಡೆ ಅಧಿನಿಯಮ, 1988ನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಹಾಗೂ ಸ್ವತಂತ್ರವಾಗಿ ತನಿಖೆ ನಡೆಸಲು ಒಂದು ಪ್ರತ್ಯೇಕ ಭ್ರಷ್ಟಾಚಾರ ನಿಗ್ರಹ ದಳವನ್ನು (Anti Corruption Bureau) ಸೃಜಿಸಲಾಗಿದೆ.

ಮೇಲಿನ ಉಲ್ಲೇಖಿತ ಕ್ರಮ ಸಂಖ್ಯೆ (2)ರಲ್ಲಿ ದಿನಾಂಕ:22-06-2016ರ ಆದೇಶದಲ್ಲಿ, ಭ್ರಷ್ಟಾಚಾರ ನಿಗ್ರಹ ದಳವನ್ನು ಸೃಜಿಸಿ ಹೊರಡಿಸಿರುವ ದಿನಾಂಕ:14-03-2016ರ ಸರ್ಕಾರದ ಆದೇಶದಲ್ಲಿನ ಆದೇಶ ಭಾಗದ ಕಂಡಿಕೆ 7 ರನ್ವಯ ಸರ್ಕಾರದ ಪ್ರತಿಯೊಂದು ಇಲಾಖೆ ಮತ್ತು ಇಂಜಿನಿಯರಿಂಗ್ ಇಲಾಖೆಯನ್ನೊಳಗೊಂಡಂತೆ ನಿರ್ದೇಶನಾಲಯ/ಆಯುಕ್ತಾಲಯ, ಕ್ಷೇತ್ರ ಇಲಾಖೆ, ಸಾರ್ವಜನಿಕೆ ಉದ್ದಿಮೆಗಳು, ಸರ್ಕಾರದಿಂದ ಸ್ಥಾಪಿತವಾದ ನಿಗಮ/ಮಂಡಳಿಗಳು ಮತ್ತು ವಿಧಾನ ಮಂಡಲದ ಅಧಿನಿಯಮದಡಿ ಸ್ಥಾಪಿತವಾಗಿರುವ ಸ್ಥಳೀಯ ಸಂಸ್ಥೆಗಳು ಹಾಗೂ ಎಲ್ಲಾ ಶಾಸನಬದ್ಧ ಸಂಸ್ಥೆಗಳ ಕೇಂದ್ರ ಸ್ಥಾನದ ಕಛೇರಿಗಳಲ್ಲಿ ಒಂದು ಜಾಗೃತ ಕೋಶ ಇರತಕ್ಕದೆಂದೂ, ಆಯಾ ಇಲಾಖಾ ಮುಖ್ಯಸ್ಥರ ನಂತರದ ಅಧಿಕಾರಿ ಈ ಕೋಶದ ಮುಖ್ಯ ಜಾಗೃತ ಅಧಿಕಾರಿ ಎಂದು ನೇಮಿಸಲು ಜಾಗೃತ ಕೋಶಗಳನ್ನು ಚಾಲನೆಗೊಳಿಸುವ ನಿಟ್ಟಿನಲ್ಲಿ ಕಾರ್ಯವಿಧಾನ/ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ದಿನಾಂಕ:22-06-2016ರ ಆದೇಶದ ಭಾಗದ ಕಂಡಿಕೆ 1(2)ರಲ್ಲಿ ತಿಳಿಸಿರುವಂತೆ ಸರ್ಕಾರದ ಪ್ರತಿಯೊಂದು ಕೇಂದ್ರ ಸ್ಥಾನದ ಕಛೇರಿಗಳಲ್ಲಿ ಇಲಾಖೆಗಳಲ್ಲಿ ಸಂಭಾವನೀಯ ಲಂಚ, ಭ್ರಷ್ಟಾಚಾರ, ಪೋರ್ಜರಿ, ವಂಚನೆ, ವಿಶ್ವಾಸ ವಂಚನೆ, ಖೊಟ್ಟಿ ದಾಖಲಾತಿ, ಅಕ್ರಮ ಆಸ್ತಿ ಪ್ರಕರಣ ಮತ್ತು ಸಂಕೀರ್ಣ ಸ್ವರೂಪದ ಪ್ರಕರಣಗಳ ಬಗ್ಗೆ ಕ್ರಮವಹಿಸಲು ಒಂದು ಜಾಗೃತ ಕೋಶ ಇರತಕ್ಕದೆಂದು ಸೂಚಿಸಿರುವ ಹಿನ್ನೆಲೆಯಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಗೆ, ನಿರ್ದೇಶನಾಲಯದ ಮುಖ್ಯಸ್ಥರ ನಂತರದ ಅಧಿಕಾರಿಯಾದ ಯೋಜನಾ ನಿರ್ದೇಶಕರನ್ನು **"ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ"** (Chief Vigilance Officer)ಯನ್ನಾಗಿ ನೇಮಿಸಲು ಹಾಗೂ ಈ ಮುಖ್ಯ ಜಾಗೃತಾಧಿಕಾರಿಯವರ ಕೋಶದೊಡನೆ ಕಾರ್ಯಕ್ರಮ ವ್ಯವಸ್ಥಾಪಕರು(ಸಾರಾ), ಕಾರ್ಯಕ್ರಮ ವ್ಯವಸ್ಥಾಪಕರು (ಮಕ್ಕಳ ರಕ್ಷಣೆ), ಲೆಕ್ಕಾಧಿಕಾರಿಗಳು ಲೆಕ್ಕಶಾಖೆ ಮತ್ತು ಕಾರ್ಯಕ್ರಮ ಅಧಿಕಾರಿ(ಮಕ್ಕಳ ರಕ್ಷಣೆ) ಇವರನ್ನೊಳಗೊಂಡು ಒಂದು ಜಾಗೃತ ಕೋಶವನ್ನು ರಚಿಸಲು ಕೆಳಕಾಣಿಸಿರುವಂತೆ ಆದೇಶ ಹೊರಡಿಸಲಾಗಿದೆ.

ಸಂಖ್ಯೆ:ಮರನಿ/ಆಡಳಿತ/ಮು.ಜಾ.ಅ-08/2021-22

ದಿನಾಂಕ: 11 -11-2021

**ಆದೇಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾಗೂ ಉಲ್ಲೇಖಿತ ಸರ್ಕಾರದ ಆದೇಶ(2)ರ ಮೇರೆಗೆ ಈ ನಿರ್ದೇಶನಾಲಯದ ವ್ಯಾಪ್ತಿಗೆ ಒಳಪಟ್ಟಂತೆ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಅಡಿಯಲ್ಲಿ ಸೇವೆ

ಸಲ್ಲಿಸುವ ಎಲ್ಲಾ ಭಾಗೀದಾರರಿಗೆ ಅನ್ವಯಿಸುವಂತೆ, ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯೋಜನಾ ನಿರ್ದೇಶಕರನ್ನು **"ಜಾಗೃತ ಕೋಶದ ಮುಖ್ಯ ಜಾಗೃತ ಅಧಿಕಾರಿ"** (Chief Vigilance Officer) ಯನ್ನಾಗಿ ನೇಮಿಸಿ ಈ ಕೆಳಕಾಣಿಸಿರುವಂತೆ ಜಾಗೃತ ಕೋಶವನ್ನು ರಚಿಸಿ ಆದೇಶಿಸಿದೆ.

**ಮಕ್ಕಳ ರಕ್ಷಣಾ ನಿರ್ದೇಶನಾಲಯದ ಜಾಗೃತ ಕೋಶ**

| ಕ್ರ.ಸಂ. | ಹುದ್ದೆಯ ಹೆಸರು | | ಕೋಶದಲ್ಲಿ ಪದನಾಮ |
|---|---|---|---|
| 1. | ಯೋಜನಾ ನಿರ್ದೇಶಕರು (ಪ್ರ) | ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ | ಮುಖ್ಯ ಜಾಗೃತ ಅಧಿಕಾರಿ |
| 2. | ಕಾರ್ಯಕ್ರಮ ವ್ಯವಸ್ಥಾಪಕರು (ಸಾರಾ) | ರಾಜ್ಯ ದತ್ತು ಸಂಪನ್ಮೂಲ ಸಂಸ್ಥೆ(ಸಾರಾ) | ಸದಸ್ಯರು |
| 3. | ಕಾರ್ಯಕ್ರಮ ವ್ಯವಸ್ಥಾಪಕರು (ಮರ) | ಮಕ್ಕಳ ರಕ್ಷಣೆ | ಸದಸ್ಯರು |
| 4. | ಲೆಕ್ಕಾಧಿಕಾರಿಗಳು | ಮಕ್ಕಳ ರಕ್ಷಣಾ ನಿರ್ದೇಶನಾಲಯ | ಸದಸ್ಯರು |
| 5. | ಕಾರ್ಯಕ್ರಮ ಅಧಿಕಾರಿ | ಮಕ್ಕಳ ರಕ್ಷಣೆ | ಸದಸ್ಯ ಕಾರ್ಯದರ್ಶಿ |

ಸದರಿ ಜಾಗೃತ ಕೋಶವು ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ ನಿರ್ದಿಷ್ಟ ಪಡಿಸಿರುವ ಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಪ್ರತಿ ಮಾಹೆಯ ಜಾಗೃತ ವರದಿಯನ್ನು ಮುಂದಿನ ಮಾಹೆಯ 5ನೇ ತಾರೀಖಿನೊಳಗೆ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

11.11.2021

ನಿರ್ದೇಶಕರು
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಹಾಗೂ ಸದಸ್ಯ ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ,
ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ.</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಶೇಷ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬೆಂಗಳೂರು.
3. ಕೋಶದ ಎಲ್ಲಾ ಅಧಿಕಾರಿಗಳಿಗೆ.
4. ಕಛೇರಿ ಪ್ರತಿ.